ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಜಂ ನಿ : ಸುಮಪ : 2020–21 ದಿನಾಂಕ : 25–09–2020

# ಪತ್ರಿಕಾ ಪ್ರಕಟಣೆ

## ಶಾಸಕ ಬಿ.ನಾರಾಯಣರಾವ್ ಅವರ ನಿಧನಕ್ಕೆ ವಿಧಾನಪರಿಷತ್‌ನಲ್ಲಿಂದು ಸಂತಾಪ

**ಬೆಂಗಳೂರು, ಸೆಪ್ಟೆಂಬರ್ 25 (ಕರ್ನಾಟಕ ವಾರ್ತೆ):**

ಶಾಸಕ ಬಿ.ನಾರಾಯಣರಾವ್ ಅವರ ನಿಧನಕ್ಕೆ ವಿಧಾನಪರಿಷತ್ ಸಭಾಪತಿಗಳಾದ ಕೆ.ಪ್ರತಾಪಶೆಟ್ಟಿ ಹಾಗೂ ಸದನದ ಸದಸ್ಯರುಗಳು ಇಂದು ನಡೆದ ವಿಧಾನಪರಿಷತ್ ಅಧಿವೇಶನದಲ್ಲಿ ಸಂತಾಪ ಸೂಚಿಸಿ, ಒಂದು ನಿಮಿಷಗಳ ಮೌನಾಚರಣೆ ನಡೆಸಿದ ನಂತರ ಕಲಾಪವನ್ನು ಮುಂದುವರಿಸಿದರು.

## ಬಿಬಿಎಂಪಿಗೆ ಪ್ರತ್ಯೇಕ ಕಾಯ್ದೆ : ಎಸ್. ಸುರೇಶ್ ಕುಮಾರ್

**ಬೆಂಗಳೂರು, ಸೆಪ್ಟೆಂಬರ್ 25 (ಕರ್ನಾಟಕ ವಾರ್ತೆ):** ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯು ವಿಸ್ತೀರ್ಣವಾಗುತ್ತಿರುವುದರಿಂದ ಪ್ರತ್ಯೇಕ ಕಾಯ್ದೆಗೆ ಜಂಟಿ ಸದನ ಸಮಿತಿ ರಚನೆ ಮಾಡಲಾಗಿದೆ ಎಂದು ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ ಸಕಾಲ ಸಚಿವರು ಎಸ್. ಸುರೇಶ್ ಕುಮಾರ್ ತಿಳಿಸಿದರು.

ಅವರು ಇಂದು ವಿಧಾನಪರಿಷತ್ ಅಧಿವೇಶನದಲ್ಲಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರ ಪರವಾಗಿ 2020ನೇ ಸಾಲಿನ " ಕರ್ನಾಟಕ ನಗರ ಪಾಲಿಕೆಗಳ (ಮೂರನೇ ತಿದ್ದುಪಡಿ) ವಿಧೇಯಕ " ವನ್ನು ಪ್ರಸ್ತಾವನೆ ಮಂಡಿಸಿ, ವಿವರಣೆ ನೀಡಿದ ಸಚಿವರು ಸಮಿತಿಯು ಅಧ್ಯಯನ ನಡೆಸುತ್ತಿರುವ ಸಂದರ್ಭದಲ್ಲಿ 198 ವಾರ್ಡ್‌ಗಳಿದ್ದು, ವಾರ್ಡ್‌ಗಳು ಸಮಾನವಾಗಿ ಹಂಚಿಕೆಯಾಗಿಲ್ಲ. ಕೆಲವು ಗ್ರಾಮಪಂಚಾಯಿತಿಗಳು ಸಹ ಇದರ ವ್ಯಾಪ್ತಿಗೆ ಬಂದಿರುವುದು ಕಂಡುಬಂದಿದೆ. ಆದ್ದರಿಂದ 198 ವಾರ್ಡ್‌ಗಳನ್ನು 225 ಕ್ಕಿಂತ ಕಡಿಮೆ ಇಲ್ಲದಂತೆ 250ಕ್ಕೆ ಮೇಲೆ ಹೆಚ್ಚಿಸದಂತೆ ವಾರ್ಡ್‌ಗಳನ್ನು ರಚಿಸಲಾಗುವುದು ಎಂದರು.

ಸದನದ ಸದಸ್ಯರು ಸರ್ವಾನುಮತದಿಂದ ಒಪ್ಪಿಗೆ ನಿಡಿದ್ದರಿಂದ ಪ್ರಸ್ತಾವನೆಯನ್ನು ಅಂಗೀಕರಿಸಿ, ವಿಧೇಯಕಕ್ಕೆ ಅನುಮೋದನೆ ನೀಡಲಾಯಿತು.

## ಕರ್ನಾಟಕ ಸಾಂಕ್ರಮಿಕ ರೋಗಗಳ ವಿಧೇಯಕ 2020 ಅಂಗೀಕಾರ

ಬೆಂಗಳೂರು, ಸೆಪ್ಟೆಂಬರ್ 25 (ಕರ್ನಾಟಕ ವಾರ್ತೆ): ಸಾಂಕ್ರಾಮಿಕ ರೋಗಗಳ ಸಂದರ್ಭದಲ್ಲಿ ಕರ್ತವ್ಯ ನಿರ್ವಹಿಸುವ ವೈದ್ಯರು, ಸರ್ಕಾರಿ ಅಧಿಕಾರಿಗಳ ಕರ್ತವ್ಯಕ್ಕೆ ಅಡ್ಡಿಪಡಿಸಿದರೆ, ಹಲ್ಲೆ ಮಾಡಿದರೆ ಶಿಕ್ಷೆ ಹಾಗೂ ದಂಡ ವಿಧಿಸುವ ಅವಧಿಯನ್ನು ಹೆಚ್ಚಿಸಲಾಗಿದೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗ ಅಭಿವೃದ್ಧಿ ಸಚಿವ ಬಿ.ಶ್ರೀರಾಮುಲು ತಿಳಿಸಿದರು.

ವಿದಾನಪರಿಷತ್ ಕಲಾಪದಲ್ಲಿಂದು ಕರ್ನಾಟಕ ಸಾಂಕ್ರಾಮಿಕ ರೋಗಗಳ ವಿಧೇಯಕ 2020 ನ್ನು ಪ್ರಸ್ತಾವನೆ ಮಂಡಿಸಿ, ಈ ಮೊದಲು ಮೂರು ತಿಂಗಳ ಜೈಲುವಾಸವಿತ್ತು. ಈಗ ಪ್ರಸ್ತುತ ಕೋವಿಡ್ ವಾರಿಯರ್ಸ್‌ಗಳು ಕರ್ತವ್ಯ ನಿರ್ವಹಿಸುತ್ತಿರುವ ಸಂದರ್ಭದಲ್ಲಿ ಇತ್ತೀಚೆಗೆ ಹಲ್ಲೆ ಮಾಡಿರುವ ಪ್ರಕರಣಗಳು ಕಂಡು ಬಂದಿದ್ದು, ಕೇಂದ್ರ ಸರ್ಕಾರವು ಸಹ ಕಾನೂನು ಜಾರಿ ಮಾಡಿದೆ.

ಯಾರೇ ವ್ಯಕ್ತಿಗಳು ಕಾರ್ಯನಿರ್ವಹಿಸುವ ಸಂದರ್ಭದಲ್ಲಿ ಅಡ್ಡಿಪಡಿಸಿದರೆ, ಮೂರು ತಿಂಗಳಿಂದ ಐದು ವರ್ಷದವರೆಗೆ ಜೈಲು ಶಿಕ್ಷೆ. 50 ಸಾವಿರದಿಂದ 2 ಲಕ್ಷ ರೂ.ಗಳವರೆಗೆ ದಂಡ ವಿಧಿಸಲಾಗುವುದು. ಕೋವಿಡ್ ಸಂದರ್ಭದಲ್ಲಿ ವೈದ್ಯರು ಹಾಗೂ ವಾರಿಯರ್ಸ್ ಮೇಲೆ ಮಾರಣಾಂತಿಕ ಹಲ್ಲೆ ನಡೆಸಿದರೆ ಆರು ತಿಂಗಳಿಂದ 7 ವರ್ಷಗಳ ಜೈಲುವಾಸ , 1 ಲಕ್ಷದಿಂದ 5 ಲಕ್ಷದವರೆಗೆ ದಂಡ ವಿಧಿಸಲಾಗುವುದು. ಪ್ರಚೋದನೆ ನೀಡಿದ ವ್ಯಕ್ತಿಗೂ ಸಹ ಈ ಶಿಕ್ಷೆ ಅನ್ವಯಿಸುತ್ತದೆ.

ಸರ್ಕಾರಿ–ಸಾರ್ವಜನಿಕರ ಆಸ್ತಿಪಾಸ್ತಿಗೆ ನಷ್ಟ ಉಂಟು ಮಾಡಿದರೆ, ಮುಷ್ಕರ ಮಾಡಿದ ಸಂದರ್ಭದಲ್ಲಿ ನ್ಯಾಯಾಲಯವು ವಿಧಿಸುವ ಆದೇಶವನ್ನು ನಿರ್ಲಕ್ಷಿಸಿದರೆ, ಅಂತಹ ವ್ಯಕ್ತಿಗಳ ಆಸ್ತಿಗಳನ್ನು ಜಪ್ತಿ ಮಾಡಲಾಗುವುದು ಎಂದು ವಿವರಣೆ ನೀಡಿದ ನಂತರ ಪ್ರಸ್ತಾವನೆಯನ್ನು ಅಂಗೀಕರಿಸಿ, ವಿಧೇಯಕಕ್ಕೆ ಅನುಮೋದನೆ ದೊರಕಿದೆ ಎಂದು ಸಭಾಪತಿಗಳು ತಿಳಿಸಿದರು.

ಇದೇ ಸಂದರ್ಭದಲ್ಲಿ 2020ನೇ ಸಾಲಿನ "ಕರ್ನಾಟಕ ಪೌರಸಭೆಗಳ (ತಿದ್ದುಪಡಿ) ವಿಧೇಯಕ" ವನ್ನು ಪೌರಾಡಳಿತ ಸಚಿವರಾದ ಕೆ.ಸಿ.ನಾರಾಯಣಗೌಡ ಅವರು ಪ್ರಸ್ತಾವನೆಯನ್ನು ಮಂಡಿಸಿದರು. ಪ್ರಸ್ತಾವನೆಯನ್ನು ಅಂಗೀಕರಿಸಿ, ವಿಧೇಯಕಕ್ಕೆ ಅನುಮೋದನೆ ನೀಡಲಾಯಿತು.

## ವಿಧಾನ ಸಭೆಯಲ್ಲಿ ವಿವಿಧ ವಿಧೇಯಕಗಳ ಮಂಡನೆ

**ಬೆಂಗಳೂರು, ಸೆಪ್ಟಂಬರ್ 25 (ಕರ್ನಾಟಕ ವಾರ್ತೆ):**

ಇಂದು ನಡೆದ ವಿಧಾನಸಭೆಯ ಕಲಾಪದಲ್ಲಿ ವಿವಿಧ ವಿಧೇಯಕಗಳನ್ನು ಮಂಡಿಸಲಾಯಿತು.

2020ನೇ ಸಾಲಿನ ಕರ್ನಾಟಕ ಆರ್ಥಿಕ ಹೊಣೆಗಾರಿಕೆ (ತಿದ್ದುಪಡಿ) ವಿಧೇಯಕ, 2020ನೇ ಸಾಲಿನ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ (ತಿದ್ದುಪಡಿ) ವಿಧೇಯಕ, 2020ನೇ ಸಾಲಿನ ಕರ್ನಾಟಕ ನಗರಪಾಲಿಕೆಗಳ (ಎರಡನೇ ತಿದ್ದುಪಡಿ ) ವಿಧೇಯಕ, 2020ನೆ ಸಾಲಿನ ಕರ್ನಾಟಕ ಸರಕು ಮತ್ತು ಸೇವೆಗಳ ತೆರಿಗೆ (ತಿದ್ದುಪಡಿ) ವಿಧೇಯಕ ಹಾಗೂ 2020ನೇ ಸಾಲಿನ ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ತಿದ್ದುಪಡಿ) ವಿಧೇಯಕಗಳನ್ನು ಪರ್ಯಾಲೋಚಿಸಬೇಕೆಂದು ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರ ಪರವಾಗಿ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಸಣ್ಣ ನೀರಾವರಿ ಸಚಿವ ಜೆ.ಸಿ. ಮಾಧುಸ್ವಾಮಿ ಅವರು ಮಂಡಿಸಿದರು.

## ಸಚಿವರ ಪ್ರವಾಸ

**ಬೆಂಗಳೂರು, ಸೆಪ್ಟೆಂಬರ್ 25 (ಕರ್ನಾಟಕ ವಾರ್ತೆ):**

ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವ ಎಸ್. ಸುರೇಶ್‌ಕುಮಾರ್ ಅವರು ಸೆಪ್ಟೆಂಬರ್ 27 ರಂದು ಚಾಮರಾಜನಗರ ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡು ಅಂದೇ ಕೇಂದ್ರಸ್ಥಾನಕ್ಕೆ ಹಿಂತಿರುಗುವರು ಹಾಗೂ ಸೆಪ್ಟೆಂಬರ್ 28 ರಿಂದ 29 ರವರೆಗೆ ಬೀದರ್ ಹಾಗೂ ಕಲಬುರಗಿ ಜಿಲ್ಲೆಗಳಲ್ಲಿ ಪ್ರವಾಸ ಕೈಗೊಳ್ಳುವರು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಗಾಯನ ನಿಲ್ಲಿಸಿದ ಗಾನಭೀಷ್ಮ: ಟಿ.ಎಸ್.ನಾಗಾಭರಣ ಸಂತಾಪ

**ಬೆಂಗಳೂರು, ಸೆಪ್ಟೆಂಬರ್ 25 (ಕರ್ನಾಟಕ ವಾರ್ತೆ):**

ಸಂಗೀತ ಮಾಂತ್ರಿಕ, ಸ್ವರಸ್ವತಿ ಪುತ್ರ, ಗಾಯನ ಲೋಕದ ಭೀಷ್ಮ ಡಾ.ಎಸ್.ಪಿ.ಬಾಲಸುಬ್ರಹ್ಮಣಂ ಅವರು ಇಹಲೋಕ ತ್ಯಜಿಸಿದ್ದು ಅತ್ಯಂತ ದುಃಖದ ವಿಷಯ ಎಂದು ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಟಿ.ಎಸ್.ನಾಗಾಭರಣ ಅವರು ಸಂತಾಪ ವ್ಯಕ್ತಪಡಿಸಿದ್ದಾರೆ.

ದಕ್ಷಿಣ ಭಾರತದ ಸುಮಾರು 16 ಭಾಷೆಗಳ ಗಾಯನ ಕ್ಷೇತ್ರದಲ್ಲಿ ತಮ್ಮ ಕಂಚಿನ ಕಂಠದ ಮೂಲಕ ಛಾಪು ಮೂಡಿಸಿದ್ದ ಎಸ್.ಪಿ.ಬಿ. 50 ಸಾವಿರಕ್ಕೂ ಹೆಚ್ಚು ಗೀತೆಗಳಿಗೆ ಧ್ವನಿಯಾಗಿ ಚಿತ್ರರಸಿಕರ ಮನಸೂರೆಗೊಂಡವರು. ಕನ್ನಡ ಚಲನಚಿತ್‌ರ ಕ್ಷೇತ್ರದಲ್ಲೂ ತಮ್ಮ ಧ್ವನಿ ಮಾಧುರ್ಯ ಹಂಚುವ ಮೂಲಕ ಕನ್ನಡದ ಹೆಮ್ಮೆಯಾಗಿದ್ದವರು.

ನನ್ನ ನಿರ್ದೇಶನದ ಮೈಸೂರು ಮಲ್ಲಿಗೆ, ನೆನಪಿನ ದೋಣಿ, ನೀಲಾ, ನಮ್ಮೆಜಮಾನ್ರು ಸಿನಿಮಾ ಸೇರಿದಂತೆ ಸುಮಾರು 15 ಸಿನಿಮಾಗಳಲ್ಲಿ ಒಟ್ಟು 60 ಗೀತೆಗಳನ್ನು ಹಾಡುವ ಮೂಲಕ ಸಿನಿಮಾದ ಗೆಲುವಿಗೆ ಹೆಗಲಾದವರು ಎಂದು ಸ್ಮರಿಸಿದ್ದಾರೆ.

ಪದ್ಮಶ್ರೀ, ಪದ್ಮವಿಭೂಷಣ ಪ್ರಶಸ್ತಿ ಸೇರಿದಂತೆ ಹತ್ತಾರು ಪ್ರಶಸ್ತಿಗಳನ್ನು ಮುಡಿಗೇರಿಸಿಕೊಂಡಿದ್ದ ಎಸ್.ಪಿ.ಬಿ. ಅವರು ನಟನೆ, ಸಂಗೀತ ಸಂಯೋಜನೆ, ರಸಸಂಜೆ ಕಾರ್ಯಕ್ರಮ ಸೇರಿದಂತೆ ಬಹುಮುಖ ಪ್ರತಿಭೆಯಾಗಿ ಅಭಿಮಾನಿಗಳ ಮನಗೆದ್ದಿದ್ದ ಅದ್ವಿತೀಯ ಸಾಧಕ ಎಂದು ಬಣ್ಣಿಸಿದ್ದಾರೆ.

ಕಳೆದ ಒಂದೂವರೆ ತಿಂಗಳಿಂದ ಕೊರೋನಾದಿಂದಾಗಿ ಆಸ್ಪತ್ರೆಗೆ ದಾಖಲಾಗಿದ್ದ ಎಸ್.ಪಿ.ಬಿ.ಅವರು ಮರಳಿ ಬರುತ್ತಾರೆ ಎಂಬ ಆಶಯವಿತ್ತು. ಆದರೆ ವಿಧಿಲಿಖಿತ ಬೇರೆಯದೇ ಆಗಿ, ಬಾರದ ಲೋಕಕ್ಕೆ ಹೋಗಿರುವುದು ದುರ್ದೈವ. ಅವರ ಆತ್ಮಕ್ಕೆ ಚಿರಶಾಂತಿ ದೊರೆಯಲಿ. ಕುಟುಂಬ ವರ್ಗಕ್ಕೆ, ಆಪ್ತರು ಮತ್ತು ಕೊಟ್ಯಾಂತರ ಅಭಿಮಾನಿಗಳಿಗೆ ಅಗಲಿಕೆಯ ನೋವು ಸಹಿಸುವ ಶಕ್ತಿ ದೊರೆಯಲಿ ಎಂದು ಪ್ರಾರ್ಥಿಸಿದ್ದಾರೆ.

## ಪಿ.ಯು.ಸಿ. ಪಾಸಾದ ವಿದ್ಯಾರ್ಥಿಗಳಿಗೆ ಕೇಂದ್ರ ಸರ್ಕಾರದ ವಿದ್ಯಾರ್ಥಿವೇತನ

**ಬೆಂಗಳೂರು, ಸೆಪ್ಟೆಂಬರ್ 25, (ಕರ್ನಾಟಕ ವಾರ್ತೆ) :**

ಕೇಂದ್ರ ಮಾನವ ಸಂಪನ್ಮೂಲ ಅಭಿವೃದ್ಧಿ ಸಚಿವಾಲಯ, ಉನ್ನತ ಶಿಕ್ಷಣ ಇಲಾಖೆ, ಕೇಂದ್ರ ಸರ್ಕಾರ, ನವದೆಹಲಿ ಇವರ ವತಿಯಿಂದ 2020ರ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ **Top 20th Perecentlie or 80th percentile** ಗಿಂತ ಹೆಚ್ಚು ಅಂಕಗಳಿಸಿದ ವಿದ್ಯಾರ್ಥಿಗಳಿಂದ **Central Sector Scheme of Scholorship for College and University Students** ಗಳಿಗೆ **online** ಮೂಲಕ ಅರ್ಜಿ ಸಲ್ಲಿಸುವಂತೆ ಸೂಚಿಸಲಾಗಿರುತ್ತದೆ.

ಈ ಸಂಬಂಧವಾಗಿ ಕೇಂದ್ರ ಸರ್ಕಾರದ ವತಿಯಿಂದ **website:www.scholarships.gov.in**ನಲ್ಲಿ **National e-Scholorship Portal**ನಲ್ಲಿ ಹೊಸ ತಂತ್ರಾಂಶವನ್ನು ಅಳವಡಿಸಲಾಗಿರುತ್ತದೆ. ಆದಕಾರಣ, ಈ **portal** ನ್ನಲಿಯೇ **2020**ರ **Fresh Batch**ನ ವಿದ್ಯಾರ್ಥಿಗಳು ಅರ್ಜಿಗಳನ್ನು **"online"** ಮೂಲಕ ಸಲ್ಲಿಸುವಂತೆ ಹಾಗೂ ಈ ವಿದ್ಯಾರ್ಥಿ ವೇತನಕ್ಕೆ ಅರ್ಜಿ ಸಲ್ಲಿಸಲಿಚ್ಚಿಸುವ ವಿದ್ಯಾರ್ಥಿಗಳು ಕಡ್ಡಾಯವಾಗಿ ಆಧಾರ್ ಸಂಖ್ಯೆಯನ್ನು ಹೊಂದಿರಬೇಕು ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ 31-10-2020.

# ಎಂ.ಹೆಚ್.ಆರ್.ಡಿ. ವಿದ್ಯಾರ್ಥಿ ವೇತನ
## ನವೀಕರಣಕ್ಕೆ "online" ಮೂಲಕ ಅರ್ಜಿ ಆಹ್ವಾನ

**ಬೆಂಗಳೂರು, ಸೆಪ್ಟೆಂಬರ್ 25, (ಕರ್ನಾಟಕ ವಾರ್ತೆ) :**

**2016ನೇ, 2017ನೇ, 2018ನೇ ಹಾಗೂ 2019ನೇ ಸಾಲಿನಲ್ಲಿ ಕೇಂದ್ರ ಸರ್ಕಾರದ Direct Benefit Transfer(DBT) Programme" ನ ಅಡಿಯಲ್ಲಿ ಎಂ.ಹೆಚ್.ಆರ್.ಡಿ. ವಿದ್ಯಾರ್ಥಿ ವೇತನಕ್ಕೆ ಆಯ್ಕೆಯಾದ ಅಭ್ಯರ್ಥಿಗಳು ಕಡ್ಡಾಯವಾಗಿ ಅವರ ಎಲ್ಲಾ ನವೀಕರಣಗಳನ್ನು "online" ಮೂಲಕವೇ ಅರ್ಜಿಯನ್ನು ಸಲ್ಲಿಸಬೇಕಾಗಿದೆ.**

**ಈ ಸಂಬಂಧವಾಗಿ ಕೇಂದ್ರ ಸರ್ಕಾರದ ವತಿಯಿಂದ website:www.scholarships.gov.inನ National e-Scholarship Portalನಲ್ಲಿ ಹೊಸ ತಂತ್ರಾಂಶವನ್ನು ಅಳವಡಿಸಲಾಗಿರುತ್ತದೆ. ಆದಕಾರಣ, ಎಲ್ಲಾ ಸಾಲಿನ ಎಂ.ಹೆಚ್.ಆರ್.ಡಿ. ವಿದ್ಯಾರ್ಥಿ ವೇತನಕ್ಕೆ ಆಯ್ಕೆಯಾದ ವಿದ್ಯಾರ್ಥಿಗಳು ನವೀಕರಣದ ನಿಮಿತ್ತ ಈ portalನಲ್ಲಿಯೇ ಅರ್ಜಿಗಳನ್ನು "online" ಮೂಲಕ ಸಲ್ಲಿಸಬೇಕು ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ 31-10-2020 ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.**